ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಗೃಹ - CD ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ಉದಯಕಾಲ    ದಿನಾಂಕ : DATE : 1/4/21

# ಚುನಾವಣೆಯಿಂದ ಅಂತರ ಕಾಯ್ದುಕೊಳ್ಳಲು ರಮೇಶಗೆ ಸೂಚನೆ?

**ಬೆಂಗಳೂರು:** ಸಿಡಿ ಪ್ರಕರಣದಲ್ಲಿ ಸಿಲುಕಿಕೊಂಡಿರುವ ಮಾಜಿ ಸಚಿವ ರಮೇಶ್ ಜಾರಕಿಹೊಳಿಗೆ ಉಪ ಚುನಾವಣೆಯಿಂದ ಅಂತರ ಕಾಯ್ದುಕೊಳ್ಳುವಂತೆ ಬಿಜೆಪಿ ಹೈಕಮಾಂಡ್ ಸೂಚನೆ ನೀಡಿದೆ.



ಸಿಡಿ ಪ್ರಕರಣದ ಯುವತಿ ರಮೇಶ್ ಜಾರಕಿಹೊಳಿ ವಿರುದ್ಧ ಅತ್ಯಾಚಾರದ ಆರೋಪ ಮಾಡಿದ್ದು, ಅಲ್ಲದೇ ಕೋರ್ಟ್ ಎದುರು ಅಧಿಕೃತ ಹೇಳಿಕೆ ದಾಖಲಿಸಿರು ವುದರಿಂದ ಪ್ರಕರಣ ಯಾವ ತಿರುವು ಪಡೆಯುತ್ತದೆ ಎನ್ನುವುದು ಸ್ಪಷ್ಟವಾಗದಿರು ವುದರಿಂದ ನೇರವಾಗಿ ಚುನಾವಣಾ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವುದು ಸೂಕ್ತವಲ್ಲ ಎಂಬ ಸೂಚನೆಯನ್ನು ಪಕ್ಷದ ವರಿಷ್ಠರು ನೀಡಿದ್ದಾರೆ ಎಂದು ತಿಳಿದು ಬಂದಿದೆ.

ಆದೇ ಕಾರಣಕ್ಕೆ ರಮೇಶ್ ಜಾರಕಿಹೊಳಿ ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಮಂಗಳಾ ಅಂಗಡಿ ಅವರ ನಾಮಪತ್ರ ಸಲ್ಲಿಕೆ ಸಮಯದಲ್ಲಿ ಹಾಜರಿರದೆ ನೇರವಾಗಿ ಗೋಕಾಕ್‌ಗೆ ತೆರಳಿದ್ದರು ಎಂಬ ಮಾಹಿತಿ ಲಭ್ಯವಾಗಿದೆ. ಅಲ್ಲಿಂದ ಮಹಾರಾಷ್ಟ್ರದ ಕೊಲ್ಹಾಪುರದಲ್ಲಿರುವ ಮಹಾಲಕ್ಷ್ಮೀ ದೇವಸ್ಥಾನಕ್ಕೆ ತೆರಳಿರುವ ರಮೇಶ್ ಜಾರಕಿಹೊಳಿ ಅಜ್ಞಾತ ಸ್ಥಳಕ್ಕೆ ತೆರಳಿದ್ದಾರೆ ಎಂದು ತಿಳಿದು ಬಂದಿದೆ.

ಉಪ ಚುನಾವಣೆಯಲ್ಲಿ ಬೆಳಗಾವಿ ಲೋಕಸಭೆ ಮತ್ತು ಮಸ್ಕಿ ವಿಧಾನಸಭೆ ಚುನಾವಣೆಗಳಲ್ಲಿ ರಮೇಶ್ ಜಾರಕಿಹೊಳಿ ಸಕ್ರಿಯರಾಗಿ ಪಾಲ್ಗೊಳ್ಳುವವರಿದ್ದರು. ಮಸ್ಕಿ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿ ಪ್ರತಾಪ್‌ಗೌಡ ಪಾಟೀಲ್ ಕೂಡ ಅದೇ ಕಾರಣಕ್ಕೆ ರಮೇಶ್ ಅವರಿಗೆ ಚುನಾವಣಾ ಪ್ರಚಾರದಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿಲ್ಲ ಎಂಬ ಮಾತುಗಳು ಕೇಳಿ ಬರುತ್ತಿವೆ.